ಸರಕಾರಿ ಶಾಲೆಗಳಲ್ಲಿನ ಶೌಚಾಲಯಗಳ ಸ್ವಚ್ಛತೆ ನಿರ್ವಹಣೆ

2581(1722); ಶ್ರೀ ಹ್ಯಾರಿಸ್ ಎನ್.ಎ. (ಶಾಂತಿನಗರ)

ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಸ್ವಚ್ಛತಾ ನಿರ್ವಹಣೆಗಾಗಿ ಮಾಡಿರುವ ವ್ಯವಸ್ಥೆಗಳೇನು;

ಆ) ಸರ್ಕಾರಿ ಶಾಲೆಗಳಲ್ಲಿ ಶೌಚಾಲಯಗಳ ಸಮರ್ಪಕ ನಿರ್ವಹಣೆಗಾಗಿ ಉಚ್ಚ ನ್ಯಾಯಾಲಯ ನೀಡಿರುವ ತೀರ್ಪಿನ ಸಂಕ್ಷಿಪ್ತ ವಿವರಗಳೇನು; ಆ ಕುರಿತು ಸರ್ಕಾರ ಜಾರಿಗೊಳಿಸಿದ ಅನುಸರಣಾ ಕ್ರಮಗಳೇನು;

ಇ) ಶೌಚಾಲಯ ಮತ್ತು ಕುಡಿಯುವ ನೀರು ಮತ್ತಿತರ ಮೂಲಸೌಕರ್ಯಗಳ ಕೊರತೆ ಇರುವ ಶಾಲೆಗಳ ಸಂಖ್ಯೆ ಎಷ್ಟು; ಶೌಚಾಲಯ ನಿರ್ವಹಣೆಯ ಸೇರಿದಂತೆ ಮೂಲಸೌಕರ್ಯಗಳ ನಿರ್ವಹಣೆ ಕುರಿತು ದಾಖಲಿಸಲಾದ ದೂರು, ಮನವಿಗಳ ಕುರಿತಾದ ವಿವರಗಳನ್ನು ಒದಗಿಸುವುದು?

ಶ್ರೀ ಕಿಮ್ಮನೆ ರತ್ನಾಕರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಸ್ವಚ್ಛತಾ ನಿರ್ವಹಣೆಗಾಗಿ ಪ್ರತಿ ವರ್ಷ ಪಂಚ ಸೌಲಭ್ಯದಡಿ ಪ್ರತಿ ಶಾಲೆಗೂ ಅನುದಾನವನ್ನು ಒದಗಿಸಲಾಗುತ್ತಿದೆ.

ಆ) Order 25.09.2012

Vikramajit Sen C.J. (oral)

"This is to controversy that drinking water and toilet facilities have now been made available. We expect the State to maintain them, without the Court having to supervise these activities. Since the purpose of the PIL has been served, we think it appropriate to dispose it of."

ಇ) ಈಗಾಗಲೇ ರಾಜ್ಯದಲ್ಲಿ ಅಸ್ತಿತ್ವದಲ್ಲಿರುವ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಶೌಚಾಲಯ ಮತ್ತು ಕುಡಿಯುವ ನೀರು ಮತ್ತಿತರ ಮೂಲಸೌಕರ್ಯಗಳನ್ನು ಒದಗಿಸಲಾಗಿದೆ. ಮಾಧ್ಯಮಿಕ ಶಿಕ್ಷಣ ಅಭಿಯಾನ ಅಡಿಯಲ್ಲಿ ನೂತನ ಸರ್ಕಾರಿ ಪ್ರೌಢಶಾಲೆಗಳಿಗೆ ಕುಡಿಯುವ ನೀರು ಮತ್ತು ಶೌಚಾಲಯ ಸೌಲಭ್ಯಗಳನ್ನು ಸಹ ಒದಗಿಸಲಾಗುತ್ತಿದೆ.

ಮಕ್ಕಳ ಸಂಖ್ಯೆಗನುಗುಣವಾಗಿ ಅಗತ್ಯವಿರುವ ಹೆಚ್ಚುವರಿ ಶೌಚಾಲಯಗಳನ್ನು ಒದಗಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವತಿಯಿಂದ ನಿರ್ಮಲ ಭಾರತ ಯೋಜನೆಯಡಿಯಲ್ಲಿ ನಿರ್ಮಾಣ ಕೈಗೊಳ್ಳಲಾಗುತ್ತಿದೆ. ದೂರು, ಮನವಿಗಳು ದಾಖಲಾಗಿರುವುದಿಲ್ಲ.

ಒಟ್ಟಾರೆ ಬೇಡಿಕೆಯನ್ನು ಗಮನಿಸಿ ಕನಿಷ್ಠ ಮೂಲಭೂತ ಸೌಕರ್ಯಗಳನ್ನು ಒದಗಿಸಲು ₹ 147.00 ಕೋಟಿಗಳ ಅನುದಾನವನ್ನು ಹೆಚ್ಚುವರಿಯಾಗಿ ಬಿಡುಗಡೆ ಮಾಡಲು ಸವಿವರ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿದ್ದು, ಅನುದಾನ ಒದಗಿಸಿದ ತಕ್ಷಣ ಆದ್ಯತೆಯ ಮೇರೆಗೆ ಒದಗಿಸಲಾಗುವುದು.

ಗ್ರಂಥಾಲಯ ಕರ ಸಂಗ್ರಹಣೆ

2583(2964); ಶ್ರೀ ಹ್ಯಾರಿಸ್ ಎನ್.ಎ. (ಶಾಂತಿನಗರ)

ಅ) ರಾಜ್ಯದ ಗ್ರಂಥಾಲಯ ಇಲಾಖೆಯ ಸ್ಥಿತಿಗತಿಗಳ ಕುರಿತಾದ ವಿವರಗಳೇನು; ಗ್ರಂಥಾಲಯಗಳು ಸುವ್ಯವಸ್ಥಿತವಾಗಿ ಕಾರ್ಯ ಚಟುವಟಿಕೆಗಳನ್ನು ನಿರ್ವಹಿಸಿಕೊಂಡು ಹೋಗುವಲ್ಲಿ ಬೇಕಾದ ಸಿಬ್ಬಂದಿ ಮತ್ತು ಮೂಲ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರ ಸೂಕ್ತ ವ್ಯವಸ್ಥೆ ಮಾಡಿದೆಯೆ;